**<u>ಕರ್ನಾಟಕ ಸರ್ಕಾರದ ನಡೆವಳಿಗಳು</u>**

**ವಿಷಯ:** ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳಲ್ಲಿನ ನಿಯಮ 118 ಹಾಗೂ ಅನುಬಂಧ – ಸಿ ಅನ್ವಯ ಗಳಿಕೆ ರಜೆ ಆಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ಸ್ಥಗಿತಗೊಳಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 3 ಎಸ್‌ಆರ್‌ಎಸ್ 2002 ದಿನಾಂಕ 28.12.2002.

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ 2003–2004ನೇ ಸಾಲಿನ ಎರಡು ವರ್ಷಗಳ ಬ್ಲಾಕ್ ಅವಧಿಗೆ ಗಳಿಕೆ ರಜೆಯನ್ನು ಆಧ್ಯರ್ಪಿಸಿ ನಗದೀಕರಣ ಸೌಲಭ್ಯವನ್ನು ನಿಗಧಿಗೊಳಿಸುವ ಬಗ್ಗೆ ಆದೇಶ ಹೊರಡಿಸಲಾಗಿದೆ.

ಸರ್ಕಾರವು ಬರಪರಿಹಾರ ಕಾರ್ಯಗಳಿಗೆ ಹಣ ಒದಗಿಸುವ ಉದ್ದೇಶದೊಂದಿಗೆ ಆಡಳಿತಾತ್ಮಕ ವೆಚ್ಚವನ್ನು ಕಡಿಮೆಗೊಳಿಸಲು ಆರ್ಥಿಕ ಮಿತವ್ಯಯ ಆದೇಶಗಳನ್ನು ಜಾರಿಗೊಳಿಸಬೇಕೆಂದು ಉದ್ದೇಶಿಸಿ ಹಲವಾರು ತೀರ್ಮಾನಗಳನ್ನು ಕೈಗೊಂಡಿದ್ದು ಅವುಗಳ ಪೈಕಿ ಗಳಿಕೆ ರಜೆಯನ್ನು ಆಧ್ಯರ್ಪಿಸಿ ನಗದೀಕರಣ ಸೌಲಭ್ಯವನ್ನು ಪಡೆಯುವ ಸೌಲಭ್ಯವನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಬೇಕೆಂಬ ತೀರ್ಮಾನವೂ ಸಹ ಸೇರಿದೆ. ಈ ಹಿನ್ನೆಲೆಯಲ್ಲಿ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 5 ಎಸ್‌ಆರ್‌ಎಸ್ 2003, ಬೆಂಗಳೂರು, ದಿನಾಂಕ: 4ನೇ ಸೆಪ್ಟೆಂಬರ್ 2003.</u>**

ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 3 ಎಸ್‌ಆರ್‌ಎಸ್ 2002 ದಿನಾಂಕ 28.12.2002ನ್ನು ರದ್ದುಪಡಿಸುತ್ತ, ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ 118 ಮತ್ತು ಅನುಬಂಧ–ಸಿ ಅನ್ವಯ ಗಳಿಕೆ ರಜೆಯನ್ನು ಆಧ್ಯರ್ಪಿಸಿ ನಗದೀಕರಣ ಸೌಲಭ್ಯವನ್ನು ಪಡೆಯಲು ಇರುವ ಸೌಲಭ್ಯವನ್ನು 01.09.2003ರಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿದೆ.

2. ಈ ಆದೇಶವು, ಈ ಸೌಲಭ್ಯವನ್ನು ಜಾರಿಗೊಳಿಸಿರುವ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಎಲ್ಲಾ ಅನುದಾನಿತ ಶಿಕ್ಷಣ ಸಂಸ್ಥೆಗಳ, ಸ್ಥಳೀಯ ಸಂಸ್ಥೆಗಳ, ವಿಶ್ವವಿದ್ಯಾನಿಲಯಗಳ ಹಾಗೂ ರಾಜ್ಯ ಸಾರ್ವಜನಿಕ ಸ್ವಾಮ್ಯದ ಸಂಸ್ಥೆಗಳ, ರಾಜ್ಯ ಸ್ವಾಯತ್ತ ಸಂಸ್ಥೆಗಳ, ಮಂಡಳಿ ಮತ್ತು ನಿಗಮಗಳು ಇತ್ಯಾದಿಗಳ ನೌಕರರಿಗೂ ಸಹ ಅನ್ವಯಿಸುತ್ತದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಕೆ.ಎಸ್.ಗೋಪಾಲಕೃಷ್ಣ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು–1).

ಗೆ:

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳಿಗೆ.
2. ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು/ವಿಶೇಷ ಕಾರ್ಯದರ್ಶಿಗಳು/ ಅಪರ ಕಾರ್ಯದರ್ಶಿಗಳು/ ಜಂಟಿ ಕಾರ್ಯದರ್ಶಿಗಳು/ಉಪಕಾರ್ಯದರ್ಶಿಗಳಿಗೆ ಹಾಗೂ ಅಧೀನ ಕಾರ್ಯದರ್ಶಿಗಳಿಗೆ.
3. ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಎಲ್ಲಾ ವಿಭಾಗಾಧಿಕಾರಿಗಳಿಗೆ.
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.

7. ಮಹಾಲೇಖಪಾಲರು (ಲೆಕ್ಕಪತ್ರ: ಲೆಕ್ಕ ಪರಿಶೋಧನೆ: ಜಿ.ಎಂ.ಶಾಖೆ),
ಕರ್ನಾಟಕ, ಬೆಂಗಳೂರು.
8. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛನ್ಯಾಯಾಲಯ, ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಆಡಳಿತ ನ್ಯಾಯಮಂಡಳಿ,ಬೆಂಗಳೂರು **ಪತ್ರದೊಂದಿಗೆ**
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ ವಿಧಾನ ಪರಿಷತ್ತು, ಬೆಂಗಳೂರು.
13. ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು.
14. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
15. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ರಾಜ್ಯಪತ್ರದಲ್ಲಿ
ಪ್ರಕಟಿಸುವುದಕ್ಕಾಗಿ.
16. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
17. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
18. ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ : ವಿಧಾನ ಮಂಡಲ ಗ್ರಂಥಾಲಯ.
19. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ (ಎಲ್ಲಾ ಜಿಲ್ಲಾ ಖಜಾನೆಗಳು).
20. ವಾರಪತ್ರ.